ಸರ್ಕಾರದ ಸೇವೆಯಲ್ಲಿ ಇರುವವರಿಗೆ ವಯೋಮಿತಿ ಸಡಿಲಿಕೆ

2317 (2981); ಶ್ರೀ ಮನೋಹರ್ ಎಚ್. ತಹಶೀಲ್ದಾರ್ (ಹಾನಗಲ್)

ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಅಧೀನಕ್ಕೊಳಪಡುವ ಸಂಸ್ಥೆಗಳ ವಿವಿಧ ಹುದ್ದೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ರಾಜ್ಯ ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಕನಿಷ್ಠ ಅವರು ಕಾರ್ಯನಿರ್ವಹಿಸಿದ ವರ್ಷದಷ್ಟು ಗರಿಷ್ಠ 10 ವರ್ಷ ಸೇವೆ ಸಲ್ಲಿಸಿದ ವರ್ಷದಷ್ಟು ಇವರಿಗೆ ವಯೋಮಿತಿ ಸಡಿಲಿಕೆ ನೀಡುವ ಬಗ್ಗೆ ಸರ್ಕಾರ ಏನಾದರೂ ಕ್ರಮ ಕೈಗೊಳ್ಳುವುದೆ; (ವಿವರ ನೀಡುವುದು)

ಆ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು)

ಅ) ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 6ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಗಳಲ್ಲಿ ರಾಜ್ಯ ಸರ್ಕಾರದ ವಿವಿಧ ಇಲಾಖೆ/ಸ್ಥಳೀಯ ಸಂಸ್ಥೆಗಳಲ್ಲಿ (ರಾಜ್ಯ ಸರ್ಕಾರದ ಅಧೀನಕ್ಕೊಳಪಡುವ ಅಥವಾ ಸರ್ಕಾರದ ಸ್ವಾಮ್ಯದಲ್ಲಿರುವ ಕೇಂದ್ರದ ಅಥವಾ ರಾಜ್ಯದ ಅಧಿನಿಯಮದನ್ವಯ ಸ್ಥಾಪಿತವಾಗಿರುವ ಸಂಸ್ಥೆಗಳು) ಕಾರ್ಯನಿರ್ವಹಿಸುತ್ತಿರುವ ಅಥವಾ ಕಾರ್ಯನಿರ್ವಹಿಸಿದ ನೌಕರರಿಗೆ ಸದರಿ ನೌಕರರು ಸೇವೆ ಸಲ್ಲಿಸಿರುವ ಅವಧಿಗೆ ಅಥವಾ ಗರಿಷ್ಠ 10 ವರ್ಷಗಳ ಅವಧಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗಿದೆ. ಆದರೆ ನಿಯಮಗಳಲ್ಲಿರುವ ಈ ಸೌಲಭ್ಯವನ್ನು ಹೊರಗುತ್ತಿಗೆ ನೌಕರರಿಗೆ ವಿಸ್ತರಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ.

ಆ) ಹೊರಗುತ್ತಿಗೆ ನಿಯತವಾದ ನೇಮಕಾತಿ ವಿಧಾನ ಅಲ್ಲದಿರುವುದರಿಂದ ವಯೋಮಿತಿ ಸಡಿಲಿಕೆಗೆ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.